ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 14ನೇ ಸೆಪ್ಟೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಮೂರನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಮೂರನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಬಸವರಾಜ ಬೊಮ್ಮಾಯಿ (ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ನೇರ ನಗದು ವರ್ಗಾವಣೆ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ವರದಿಯನ್ನು ಸಭೆಯ ಮುಂದಿಡುವುದು.

3. ವರದಿಯನ್ನೊಪ್ಪಿಸುವುದು

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಅಧ್ಯಕ್ಷರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2020-21ನೇ ಸಾಲಿನ ಮೂರನೇ ವರದಿಯನ್ನೊಪ್ಪಿಸುವುದು.

4. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:-

ಅ) 2022ನೇ ಸಾಲಿನ ಕರ್ನಾಟಕ ಭೂ ಕಬಳಿಕೆ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

... 2/

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಸಿದ್ದರಾಮಯ್ಯ, ಯು.ಟಿ. ಅಬ್ದುಲ್ ಖಾದರ್, ಕೆ.ಆರ್. ರಮೇಶಕುಮಾರ, ಕೃಷ್ಣ ಬೈರೇಗೌಡ, ಡಾ. ಅಜಯ ಧರ್ಮಸಿಂಗ್, ಪ್ರಿಯಾಂಕ ಖರ್ಗೆ, ಹಾಗೂ ಇತರರು ಮತ್ತು ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ವೆಂಕಟರಾವ್ ನಾಡಗೌಡ, ಸಿ.ಎನ್. ಬಾಲಕೃಷ್ಣ, ಎಂ. ಅಶ್ವಿನ್ ಕುಮಾರ್, ಕೆ.ಎಸ್. ಲಿಂಗೇಶ್ ಹಾಗೂ ಇತರರು – ರಾಜ್ಯದಲ್ಲಿ ಪ್ರವಾಹ ಮತ್ತು ಅತಿವೃಷ್ಟಿಯ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಮುಂದುವರೆದ ಚರ್ಚೆ (ಎರಡನೇ ದಿನ).

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಬಸನಗೌಡ ದದ್ದಲ ಅವರು** – ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ ವಿಧಾನಸಭಾ ಕ್ಷೇತ್ರವಾರು ಸಂಚಿತ ವಂಚಿತತೆ ಸೂಚ್ಯಂಕ (ಸಿಡಿಐ ಇಂಡೆಕ್ಸ್ ಕೋಡ್) ವನ್ನು ಪರಿಷ್ಕರಣೆ ಮಾಡಿ ನಿಗದಿಪಡಿಸುವ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

2) **ಶ್ರೀ ಕೆ.ವೈ. ನಂಜೇಗೌಡ ಅವರು** – ರಾಜ್ಯದಲ್ಲಿರುವ ನಗರ ಯೋಜನಾ ಪ್ರಾಧಿಕಾರಗಳಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಕ್ರಿಯಾ ಯೋಜನೆಯನ್ನು ತಯಾರಿಸುವಾಗ ಸ್ಥಳೀಯ ಶಾಸಕರನ್ನು ಪರಿಗಣಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

3) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲಿ ಬಯೋಮೆಟ್ರಿಕ್ ವ್ಯವಸ್ಥೆಯಿಂದ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಶಿವಾನಂದ ಪಾಟೀಲ ಅವರು** – ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಹಾಯ್ದು ಹೋಗಿರುವ ಹಡಗಲಿ–ಯಂಭತ್ನಾಳ–ನೇಗಿನಾಳ–ಮುಳ್ಳಾಳ–ಸಾತಿಹಾಳ ಜಿಲ್ಲಾ ಮುಖ್ಯ ರಸ್ತೆಯಲ್ಲಿರುವ ಹಳ್ಳಕ್ಕೆ ಸೇತುವೆ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

5) **ಶ್ರೀ ಟಿ.ಡಿ. ರಾಜೇಗೌಡ ಅವರು** – ರಾಜ್ಯದಲ್ಲಿ ಹೊಲಿಗೆ ವೃತ್ತಿಯಿಂದ ಜೀವನ ಸಾಗಿಸುತ್ತಿರುವ ಟೈಲರ್‌ಗಳಿಗೆ ಅಸಂಘಟಿತ ಕಾರ್ಮಿಕ ಸಾಮಾಜಿಕ ಭದ್ರತಾ ಮಂಡಳಿ ಮೂಲಕ ಭವಿಷ್ಯ ನಿಧಿ ಹಾಗೂ 60 ವರ್ಷ ಮೇಲ್ಪಟ್ಟ ಟೈಲರ್‌ಗಳಿಗೆ ಮಾಸಿಕ ಪಿಂಚಣಿ ಜಾರಿ ಮಾಡುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

6) **ಡಾ. ಕೆ. ಅನ್ನದಾನಿ ಅವರು** – ಮಳವಳ್ಳಿ ತಾಲ್ಲೂಕು ಬಿ.ಜಿ. ಪುರ ಹೋಬಳಿಯ ಪೂರಿಗಾಲಿ ಏತ ನೀರಾವರಿ ಕಾಮಗಾರಿಯನ್ನು ಪೂರ್ಣಗೊಳಿಸುವ ಕಾಲಮಿತಿಯ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

7) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ರಾಜ್ಯದಲ್ಲಿ ಖಾಸಗಿ ಅನುದಾನಿತ ಶಾಲೆಗಳಲ್ಲಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳುವ ಬಗ್ಗೆ ಹಾಗೂ ಖಾಸಗಿ ಶಾಲೆಗಳನ್ನು ಹೊಸದಾಗಿ ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

8) **ಶ್ರೀ ಎಂ.ವೈ. ಪಾಟೀಲ ಅವರು** – ಅಫಜಲಪುರ ಪಟ್ಟಣದಲ್ಲಿ ವಿದ್ಯಾರ್ಥಿಗಳ ಹೆಚ್ಚಿನ ವಿದ್ಯಾಭ್ಯಾಸದ ಅನುಕೂಲಕ್ಕಾಗಿ ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎಂ. ಕೃಷ್ಣಪ್ಪ (ಬೆಂಗಳೂರು ದಕ್ಷಿಣ) ಅವರು** – ಜಿಗಣಿ–ಬೊಮ್ಮಸಂದ್ರ ಲಿಂಕ್ ರಸ್ತೆ ಹಾಗೂ ಜಿಗಣಿ ಕೈಗಾರಿಕಾ ಪ್ರದೇಶದ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

10) **ಶ್ರೀ ಕೆ. ರಘುಪತಿ ಭಟ್ ಅವರು** – ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ಪಂಗಡ, ಆದಿವಾಸಿ ಬುಡಕಟ್ಟು ಸಮುದಾಯ, ಕೊರಗ ಜನಾಂಗದವರ ವೈದ್ಯಕೀಯ ವೆಚ್ಚವನ್ನು ಈ ಹಿಂದಿನಂತೆಯೇ ಮರುಪಾವತಿಸುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm